# All India Radio: Bangalore
# National Bulletin In Kannada
## 06.02.2025 13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

06.02.2025 13.10 p.m.

<><><><>

ಮುಖ್ಯಾಂಶಗಳು

1. ಅಮೆರಿಕದಿಂದ ಭಾರತೀಯ ಪ್ರಜೆಗಳ ಗಡಿಪಾರು ; ಸಂಸತ್ತಿನ ಉಭಯ ಸದನಗಳಲ್ಲಿ ಗದ್ದಲ - ಲೋಕಸಭೆ ಕಲಾಪ ಮುಂದೂಡಿಕೆ
2. ರಾಜ್ಯಸಭೆಯಲ್ಲಿಂದು ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಉತ್ತರಿಸಲಿರುವ ಪ್ರಧಾನಿ ನರೇಂದ್ರ ಮೋದಿ
3. ಇದೇ ೧೦ ರಂದು ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮ ; ವಿದ್ಯಾರ್ಥಿಗಳೊಂದಿಗೆ ಪ್ರಧಾನಮಂತ್ರಿ ಸಂವಾದ
4. ಮಹಿಳಾ ಕ್ರೀಡೆಗಳಲ್ಲಿ ತೃತೀಯಲಿಂಗಿಗಳ ಸ್ಪರ್ಧೆ ನಿಷೇಧಿಸುವ ಕಾರ್ಯಕಾರಿ ಆದೇಶಕ್ಕೆ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಸಹಿ
5. ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ; ಮೊದಲ ಪಂದ್ಯದಲ್ಲಿ ಭಾರತದ ವಿರುದ್ಧ ಟಾಸ್ ಗೆದ್ದ ಇಂಗ್ಲೆಂಡ್ ಬ್ಯಾಟಿಂಗ್ ಆಯ್ಕೆ

<><><><>

ಸಂಸತ್ತಿನ ಉಭಯ ಸದನಗಳಲ್ಲಿಂದು ಅಮೆರಿಕದಿಂದ ಭಾರತೀಯರನ್ನು ವಾಪಸ್ ಕಳುಹಿಸಿರುವ ಕುರಿತಂತೆ ಚರ್ಚೆ ಆಗ್ರಹಿಸಿ ಪ್ರತಿಪಕ್ಷಗಳು ಗದ್ದಲ ಉಂಟು ಮಾಡಿದರು. ಗದ್ದಲದ ಹಿನ್ನೆಲೆ ಲೋಕಸಭಾ ಕಲಾಪವನ್ನು ಅಪರಾಹ್ನ ೨ ಗಂಟೆಯವರೆಗೆ ಮುಂದೂಡಲಾಗಿದೆ. ಇಂದು ಬೆಳಗ್ಗೆ ಲೋಕಸಭೆಯಲ್ಲಿ ಸದನ ಸೇರಿದಾಗ ಕಾಂಗ್ರೆಸ್, ಸಮಾಜವಾದಿ ಪಕ್ಷ, ತೃಣಮೂಲ ಕಾಂಗ್ರೆಸ್ ಮತ್ತಿತರ ವಿರೋಧ ಪಕ್ಷಗಳು ಘೋಷಣೆಗಳನ್ನು ಕೂಗುತ್ತ ಘಟನೆಯ ಕುರಿತು ಚರ್ಚೆಗೆ ಆಗ್ರಹಿಸಿದವು. ಈ ವೇಳೆ ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ, ಈ ವಿಚಾರ ವಿದೇಶದ ನೀತಿಗೆ ಸಂಬಂಧಿಸಿದ್ದಾಗಿದೆ. ಹಾಗಾಗಿ ಸುಗಮ ಕಲಾಪ ನಡೆಯಲು ಅನುವು ಮಾಡಿಕೊಡಬೇಕೆಂದು ಸದಸ್ಯರಲ್ಲಿ ಮನವಿ ಮಾಡಿದರು. ಆದರೂ ಗದ್ದಲ ಮುಂದುವರೆದ ಕಾರಣ ಸಭಾಧ್ಯಕ್ಷರು

ಕಲಾಪವನ್ನು ಮೊದಲಿಗೆ ೧೨ ಗಂಟೆಗೆ ಮುಂದೂಡಿದರು. ಬಳಿಕ ಕಲಾಪ ಪುನರಾಂಭಗೊಂಡಾಗಲು ಪ್ರತಿಪಕ್ಷಗಳು ಗದ್ದಲ ಮುಂದುವರಿಸಿದ ಹಿನ್ನೆಲೆಯಲ್ಲಿ ಕಲಾಪವನ್ನು ೨ ಗಂಟೆಯವರೆಗೆ ಮುಂದೂಡಲಾಯಿತು. ರಾಜ್ಯ ಸಭೆಯಲ್ಲೂ ಇದೇ ವಿಷಯ ಕುರಿತಂತೆ ಪ್ರತಿಪಕ್ಷಗಳಿಂದ ಗದ್ದಲ ನಡೆದ ಬೆನ್ನಲ್ಲೆ ಉಪಸಭಾಪತಿ ಹರಿವಂಶ್ ರಾಯ್, ಮೇಲ್ಮನೆಯ ಕಲಾಪವನ್ನು ಮೊದಲಿಗೆ ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಿದರು. ಪ್ರಸ್ತುತ ರಾಜ್ಯಾಸಭಾ ಕಲಾಪ ಮುಂದುವರೆದಿದೆ. ಅಮೆರಿಕದಿಂದ ಭಾರತೀಯ ಪ್ರಜೆಗಳ ಗಡಿಪಾರು ವಿಷಯಕ್ಕೆ ಸಂಬಂಧಿಸಿದಂತೆ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಇಂದು ಮಧ್ಯಾಹ್ನ ೨ ಗಂಟೆಯ ವೇಳೆಗೆ ರಾಜ್ಯಸಭೆಯಲ್ಲಿ ಹೇಳಿಕೆ ನೀಡಲಿದ್ದಾರೆ.

<><><><>

ರಾಜ್ಯಸಭೆಯಲ್ಲಿಂದು ಸಂಸತ್ತಿನ ಜಂಟಿ ಸದನವನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಪ್ರಧಾನಿ ನರೇಂದ್ರ ಮೋದಿ ಉತ್ತರಿಸಲಿದ್ದಾರೆ. ಈ ಕುರಿತಂತೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ನೀಡಿದ್ದಾರೆ. ಲೋಕಸಭೆಯಲ್ಲಿ ಈಗಾಗಲೇ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ವಂದನಾ ನಿರ್ಣಯವನ್ನು ಅಂಗೀಕರಿಸಲಾಗಿದೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಪ್ರತಿವರ್ಷವೂ, ಪರೀಕ್ಷೆಗಳನ್ನು ಎದುರಿಸುವ ಕುರಿತಂತೆ ವಿದ್ಯಾರ್ಥಿಗಳೊಂದಿಗೆ ನಡೆಸುವ ಸಂವಾದ ಕಾರ್ಯಕ್ರಮ ಪರೀಕ್ಷಾ ಪೇ ಚರ್ಚಾ ಇದೇ ೧೦ ರಂದು ಬೆಳಗ್ಗೆ ೧೧ ಗಂಟೆಗೆ ಜರುಗಲಿದೆ.

ಈ ಕುರಿತು ಒಂದು ವರದಿ : ಬಿ.ಎ. ಅಶೋಕ (೬೦ ಸೆಕೆಂಡ್ಸ್ )

ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಳ್ಳಲಿದ್ದು, ಈ ವೇಳೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಪರೀಕ್ಷಾ ಸಿದ್ಧತೆ, ಒತ್ತಡ ನಿರ್ವಹಣೆ ಮತ್ತು ವೈಯಕ್ತಿಕ ಬೆಳವಣಿಗೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಈ ವರ್ಷ ಪ್ರತಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದಿಂದ ೩೬ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದ್ದು, ಇವರಲ್ಲಿ ಕಲಾ ಉತ್ಸವ ಮತ್ತು ವೀರ ಗಾಥಾ ಕಾರ್ಯಕ್ರಮದ ವಿಜೇತರೂ ಸೇರಿದ್ದಾರೆ. ಈ ಬಾರಿಯ ಪರೀಕ್ಷಾ ಪೇ ಚರ್ಚಾ ಹೊಸ ವಿನ್ಯಾಸದೊಂದಿಗೆ ೮ ಸಂಚಿಕೆಗಳಲ್ಲಿ ಮೂಡಿ ಬರುತ್ತಿದೆ. ಪ್ರಧಾನಮಂತ್ರಿಯವರ ಸಂವಾದ

ಕಾರ್ಯಕ್ರಮವನ್ನು ದೂರದರ್ಶನ, ಸ್ವಯಂಪ್ರಭ, ಪ್ರಧಾನಮಂತ್ರಿ ಕಾರ್ಯಾಲಯದ ಅಧಿಕೃತ ಯುಟ್ಯೂಬ್ ಚಾನೆಲ್, ಶಿಕ್ಷಣ ಸಚಿವಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಸಾಮಾಜಿಕ ಜಾಲತಾಣಗಳಲ್ಲಿ ನೇರ ಪ್ರಸಾರ ಮಾಡಲಾಗುವುದು. ೨೦೧೮ರಲ್ಲಿ ಆರಂಭವಾದಾಗಿನಿಂದ ಪರೀಕ್ಷಾ ಪೇ ಚರ್ಚಾ ಒಂದು ರಾಷ್ಟ್ರವ್ಯಾಪಿ ಆಂದೋಲನವಾಗಿ ರೂಪುಗೊಂಡಿದೆ. ಅಲ್ಲದೇ ಈ ವರ್ಷದ ಆವೃತ್ತಿ ೫ ಕೋಟಿಗೂ ಹೆಚ್ಚಿನ ಭಾಗವಹಿಸುವಿಕೆ ಮೂಲಕ ಹಿಂದಿನ ಆವೃತ್ತಿಗಳ ದಾಖಲೆಯನ್ನು ಮುರಿದಿದೆ.

<><><>

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಪುರುಷರನ್ನು ಮಹಿಳಾ ಕ್ರೀಡೆಗಳಿಂದ ಹೊರಗಿಡುವ ಮತ್ತು ತೃತೀಯಲಿಂಗಿ ಮಹಿಳೆಯರು, ಮಹಿಳಾ ಕ್ರೀಡೆಗಳಲ್ಲಿ ಸ್ಪರ್ಧಿಸುವುದನ್ನು ನಿಷೇಧಿಸುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದ್ದಾರೆ. ಈ ಆದೇಶವನ್ನು ಪಾಲಿಸಲು ನಿರಾಕರಿಸುವ ಯಾವುದೇ ಶಾಲೆಗಳಿಗೆ ಸರ್ಕಾರಿ ಅನುದಾನವನ್ನು ಹಿಂತೆಗೆದುಕೊಳ್ಳುವಂತೆ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿದೆ. ಒಂದು ಕ್ರೀಡೆಯಲ್ಲಿ, ಕ್ರೀಡಾಪಟುವಿನ ಭಾಗವಹಿಸುವಿಕೆಯ ಅರ್ಹತೆಯನ್ನು ಲಿಂಗ ಗುರುತಿಸುವಿಕೆ ಅಥವಾ ಟೆಸ್ಟೋಸ್ಟೆರಾನ್ ಪರೀಕ್ಷೆಯ ಬದಲು ಅವರ ಲಿಂಗಕ್ಕೆ ಅನುಗುಣವಾಗಿ ನಿರ್ಧರಿಸುವ ಮೂಲಕ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬದಲಾವಣೆಗಳನ್ನು ಮಾಡುವಂತೆ ಅಂತಾರಾಷ್ಟ್ರೀಯ ಒಲಿಂಪಿಕ್ ಸಮಿತಿಯನ್ನು ಒತ್ತಾಯಿಸಲು ರಾಜ್ಯ ಇಲಾಖೆಗೆ ನಿರ್ದೇಶನ ನೀಡಲಾಗಿದೆ. ನಿನ್ನೆ ಅಮೆರಿಕದಲ್ಲಿ ರಾಷ್ಟ್ರೀಯ ಬಾಲಕಿಯರು ಮತ್ತು ಮಹಿಳಾ ಕ್ರೀಡಾ ದಿನದ ಸಂದರ್ಭದಲ್ಲಿ ಈ ಆದೇಶಕ್ಕೆ ಸಹಿ ಹಾಕಲಾಯಿತು.

<><><>

ಇದೇ ೧೦ ರಿಂದ ೧೪ರವರೆಗೆ ಬೆಂಗಳೂರಿನ ಯಲಹಂಕದಲ್ಲಿ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ನಡೆಯಲಿದ್ದು, ವೈಮಾನಿಕ ಪ್ರದರ್ಶನಕ್ಕೆ ಭೇಟಿ ನೀಡುವ ಎಲ್ಲ ಜನರ ಸುರಕ್ಷತೆ ಖಾತರಿ ಪಡಿಸಿಕೊಳ್ಳಲು ಗೃಹ ಸಚಿವಾಲಯ, ಬೆಂಗಳೂರು ಪೊಲೀಸ್, ಸಿಐಎಸ್‌ಎಫ್ ಮತ್ತು ಗುಪ್ತಚರ ಸಂಸ್ಥೆಗಳ ಸಹಯೋಗದೊಂದಿಗೆ ಬಹು ಹಂತದ ಭದ್ರತಾ ವ್ಯವಸ್ಥೆ ನಿಯೋಜಿಸಲಾಗುತ್ತಿದೆ. ದಿನದ ೨೪ ಗಂಟೆಯೂ ಸಿ ಸಿ ಟಿವಿ ಮೇಲ್ವಿಚಾರಣೆ ಇರಲಿದೆ. ಪ್ರದರ್ಶನ ಸ್ಥಳದಲ್ಲಿ ಸಂದರ್ಶಕರ ಸುಗಮ ಸಂಚಾರಕ್ಕಾಗಿ ೧೦೦ಕ್ಕೂ ಅಧಿಕ ಇ-ಕಾರ್ಟ್‌ಗಳ ವಿಶೇಷ ಬಳಕೆಗೆ ನಿರ್ಧರಿಸಲಾಗಿದೆ. ಅಲ್ಲದೇ ಈ ಪ್ರದೇಶದಲ್ಲಿ ಅನಧಿಕೃತ ಡ್ರೋನ್ ಚಟುವಟಿಕೆ ನಿರ್ವಹಿಸಲು ನಿಗ್ರಹ ಕ್ರಮಗಳೊಂದಿಗೆ ಕೆಂಪು

ಡ್ರೋನ್ ವಲಯಗಳನ್ನು ಗೊತ್ತುಪಡಿಸಲಾಗಿದೆ. ಯಲಹಂಕ ವಾಯುಪಡೆ ನಿಲ್ದಾಣಕ್ಕೆ ಭೇಟಿ ನೀಡುವವರೆಗೆ ಉಚಿತ ಸಾರಿಗೆ ಸೌಲಭ್ಯಗಳನ್ನು ಒದಗಿಸಲು ರಕ್ಷಣಾ ಸಚಿವಾಲಯ ಎಸಿ, ವೋಲ್ವೊ, ಶೆಟಲ್ ಬಸ್‌ಗಳನ್ನು ಗುತ್ತಿಗೆ ಪಡೆದುಕೊಂಡಿದೆ.

<><><><>

ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದಲ್ಲಿ ಲಕ್ಷಾಂತರ ಭಕ್ತರು ದೇಶ-ವಿದೇಶಗಳಿಂದ ಭಾಗಿಯಾಗುತ್ತಿದ್ದು, ಸ್ವಚ್ಛತೆ ಹಾಗೂ ಕುಡಿಯುವ ನೀರಿಗೆ ದೊಡ್ಡ ಪ್ರಮಾಣದಲ್ಲಿ ವ್ಯವಸ್ಥೆ ಮಾಡಲಾಗಿದೆ. ಕುಂಭಮೇಳ ಪ್ರದೇಶದಲ್ಲಿ ಯಾವುದೇ ಅಡೆತಡೆ ಇಲ್ಲದೇ ದಿನದ ೨೪ ಗಂಟೆಯೂ ಕಾರ್ಯ ನಿರ್ವಹಿಸುವ ೨೩೩ ನೀರಿನ ಎಟಿಎಂಗಳನ್ನು ಸ್ಥಾಪಿಸಲಾಗಿದೆ. ಇವುಗಳ ಮೂಲಕ ಭಕ್ತರು ಸ್ವಚ್ಛ ಆರ್‌ಒ ಕುಡಿಯುವ ನೀರನ್ನು ಪಡೆಯಬಹುದಾಗಿದೆ. ಅಧಿಕೃತ ಮಾಹಿತಿಯ ಪ್ರಕಾರ ಜನವರಿ ೨೧ ರಿಂದ ಫೆಬ್ರವರಿ ೧ ರವರೆಗೂ ೪೦ ಲಕ್ಷಕ್ಕೂ ಅಧಿಕ ಭಕ್ತರು ಇದರ ಪ್ರಯೋಜನ ಪಡೆದಿದ್ದಾರೆ. ಆರಂಭದಲ್ಲಿ ಒಂದು ರೂಪಾಯಿ ವೆಚ್ಚದಲ್ಲಿ ದೊರೆಯುತ್ತಿದ್ದ ೧ ಲೀಟರ್ ಕುಡಿಯುವ ನೀರನ್ನು ಉಚಿತವಾಗಿ ವಿತರಿಸಲಾಗುತ್ತಿದೆ.

<><><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ನಾಳೆ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ಒಂದು ದಿನದ ಪ್ರವಾಸದ ಭಾಗವಾಗಿ ಅವರು, ರಾಣೆಬೆನ್ನೂರಿಗೆ ಭೇಟಿ ನೀಡಲಿದ್ದು, ಅಲ್ಲಿ ಅವರು, ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><><>

ಸೆಬಿ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ೮೮ ಕೋಟಿ ರೂಪಾಯಿಗಳ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಆರೋಪಿಗಳಿಗೆ ಅಧಿಕೃತ ದಾಖಲೆಗಳ ಪ್ರತಿಗಳನ್ನು ಒದಗಿಸಲು ಜಾರಿ ನಿರ್ದೇಶನಾಲಯ ವಿಫಲವಾದ ಹಿನ್ನೆಲೆ ದೆಹಲಿ ನ್ಯಾಯಾಲಯ ಇಡಿ ನಿರ್ದೇಶಕ ರಾಹುಲ್ ನವೀನ್ ಅವರಿಗೆ ಸಮನ್ಸ್ ಜಾರಿ ಮಾಡಿದೆ. ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶರಾದ ಅಪರ್ಣಸ್ವಾಮಿ ಅವರು, ಮಾರ್ಚ್ ೨೯ರಂದು ನ್ಯಾಯಾಲಯದ ಎದುರು ಹಾಜರಾಗುವಂತೆ ನವೀನ್ ಅವರಿಗೆ ನಿರ್ದೇಶಿಸಿದ್ದು, ಆರೋಪಿಗಳಿಗೆ ಒದಗಿಸಬೇಕಾದ ದಾಖಲೆಗಳ ಪ್ರಸ್ತುತ ಸ್ಥಿತಿಯ ಕುರಿತು ಲಿಖಿತ ರೂಪದಲ್ಲಿ ಸಲ್ಲಿಸಲು ಸೂಚಿಸಿದ್ದಾರೆ. ಯೂನಿಕಾನ್ ಸೆಕ್ಯೂರಿಟೆಸ್ ಪ್ರೈವೇಟ್ ಲಿಮಿಟೆಡ್ ಮತ್ತು

ಅದರ ಪ್ರವರ್ತಕರ ವಿರುದ್ಧದ ಪ್ರಕರಣದಲ್ಲಿ ಆರೋಪಿಗಳಿಗೆ ಒದಗಿಸಲಾದ ಪ್ರತಿಗಳು ಇಲಾಖೆಯಲ್ಲಿ ಲಭ್ಯವಿರುವ ಅತ್ಯುತ್ತಮ ಪ್ರತಿಗಳಾಗಿದೆ ಎಂದು ಇಡಿ ಉಪನಿರ್ದೇಶಕ ದೀಪಿನ್ ಗೋಯಲ್ ನ್ಯಾಯಾಲಯಕ್ಕೆ ತಿಳಿಸಿದ ನಂತರ ಈ ಆದೇಶ ಹೊರಡಿಸಲಾಗಿದೆ.

<><><>

ಬಂಡವಾಳ ಹೂಡಿಕೆ ರಾಜ್ಯಗಳಿಗೆ ವಿಶೇಷ ನೆರವು ಎಸ್‌ಎಎಸ್‌ಸಿಐ ಯೋಜನೆಯಡಿ ತೆಲಂಗಾಣಕ್ಕೆ ೧೭೯.೫ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ನಿರ್ಧಾರಿತ ಮೈಲಿಗಲ್ಲುಗಳನ್ನು ಸಾಧಿಸಿದ ಬಳಿಕ ರಾಜ್ಯಗಳು ಈ ಯೋಜನೆಯಡಿ ಪ್ರೋತ್ಸಾಹ ಧನ ಪಡೆಯಲು ಅರ್ಹರಾಗುತ್ತವೆ. ಸರ್ಕಾರ ಹೊರಡಿಸಿರುವ ಆದೇಶದ ಪ್ರಕಾರ ತೆಲಂಗಾಣ ಸರ್ಕಾರ ನಿಗದಿಪಡಿಸಿದ ಮೈಲಿಗಲ್ಲುಗಳನ್ನು ಸಾಧಿಸಿದ ಹಿನ್ನೆಲೆಯಲ್ಲಿ ಈ ಪ್ರೋತ್ಸಾಹ ಧನ ಪಡೆಯಲು ಅರ್ಹವಾಗಿದೆ.

<><><>

ಪ್ರಮುಖ ವ್ಯಾಪಾರ ಅಡಚಣೆಗಳ ಭೀತಿಯ ಬೆನ್ನಲ್ಲೆ ಚೀನಾದಿಂದ ಬರುವ ಪಾರ್ಸೆಲ್‌ಗಳನ್ನು ನಿಷೇಧಿಸುವ ನಿರ್ಧಾರದಿಂದ ಅಮೆರಿಕ ಅಂಚೆ ಸೇವೆ - ಯುಎಸ್‌ಪಿಎಸ್ ಹಿಂದೆ ಸರಿದಿದೆ. ಚೀನಾದಿಂದ ಬರುವ ಪ್ಯಾಕೇಜ್‌ಗಳನ್ನು ಸ್ಥಗಿತಗೊಳಿಸುವ ನಿರ್ಧಾರ ಅಮೆರಿಕ ಅಧ್ಯಕ್ಷರು ಚೀನಾ ಮೇಲೆ ವಿಧಿಸಿದ ಹೆಚ್ಚುವರಿ ಸುಂಕದ ನಿರ್ಧಾರದ ಬಳಿಕ ಕೈಗೊಳ್ಳಲಾಗಿತ್ತು.

<><><>

ಮಹಾರಾಷ್ಟ್ರದ ನಾಗ್ಪುರದ ವಿದರ್ಭ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣದಲ್ಲಿ ಇಂದು ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಇಂಗ್ಲೆಂಡ್ ತಂಡ ಬ್ಯಾಟಿಂಗ್ ಆಯ್ದುಕೊಂಡಿದೆ. ಭಾರತ ತಂಡಕ್ಕೆ ರೋಹಿತ್ ಶರ್ಮಾ ನಾಯಕರಾಗಿದ್ದು, ವಿರಾಟ್ ಕೊಹ್ಲಿ ತಂಡಕ್ಕೆ ಮರಳಿದ್ದಾರೆ. ಸರಣಿಗಾಗಿ ಭಾರತೀಯ ತಂಡಕ್ಕೆ ವರುಣ್ ಚಕ್ರವರ್ತಿ ಅವರನ್ನು ಕೂಡ ಸೇರಿಸಿಕೊಳ್ಳಲಾಗಿದೆ. ಜೋಸ್ ಬಟ್ಲರ್ ನೇತೃತ್ವದ ಇಂಗ್ಲೆಂಡ್ ತಂಡ, ಟಿ-೨೦ ಸರಣಿಗೆ ಆಯ್ಕೆ ಮಾಡಿಕೊಂಡಿದ್ದ ತಂಡವನ್ನೇ ಉಳಿಸಿಕೊಂಡಿದೆ. ಭಾರತ ತಂಡ, ಭಾನುವಾರ ಕಟಕ್‌ನಲ್ಲಿ ಇಂಗ್ಲೆಂಡ್ ವಿರುದ್ಧ ಎರಡನೇ ಪಂದ್ಯವನ್ನು ಆಡಲಿದ್ದು, ಮೂರನೇ ಮತ್ತು ಅಂತಿಮ ಏಕದಿನ ಪಂದ್ಯ ಈ ತಿಂಗಳ ೧೨ ರಂದು

ಅಹಮದಾಬಾದ್‌ನಲ್ಲಿ ನಡೆಯಲಿದೆ. ಭಾರತ ಇತ್ತೀಚೆಗೆ ಪ್ರವಾಸಿ ತಂಡದ ವಿರುದ್ಧದ ಐದು ಪಂದ್ಯಗಳ ಟಿ-೨೦ ಅಂತಾರಾಷ್ಟ್ರೀಯ ಸರಣಿಯಲ್ಲಿ ೪-೧ ಅಂತರದ ಭರ್ಜರಿ ಜಯ ಸಾಧಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>